# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2020-21 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:06.02.2021 ರಂದು ವಾರ್ಡ್ ನಂ.196-ಅಂಜನಾಪುರ ಕೋವಿಡ್ ವಾರ್ ರೂಂ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಪ್ರಮೋದ್ ಕುಮಾರ್.ಎನ್.ಜಿ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ವಿ.ತಿಮ್ಮಯ್ಯ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀಮತಿ ಡಾ॥ಕೀರ್ತಿ ಪ್ರಸಾದ್ | ವಾರ್ಡ್‌ನ ವೈದ್ಯಾಧಿಕಾರಿಗಳು | ಹಾಜರಿರುತ್ತಾರೆ. |
| 4 | ಶ್ರೀ ನರೇಶ್.ಬಿ.ಎಸ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಗೈರು ಹಾಜರಿರುತ್ತಾರೆ. |
| 6 | ಶ್ರೀ ನವೀನ್ ಬಿ.ಸಿ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) | ಹಾಜರಿರುತ್ತಾರೆ. |
| 7 | ಬಿ.ಡಿ.ಎ ಅಧಿಕಾರಿಗಳು | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಗೈರು ಹಾಜರಿರುತ್ತಾರೆ. |
| 8 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 9 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಗೈರು ಹಾಜರಿರುತ್ತಾರೆ. |
| 10 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಗೈರು ಹಾಜರಿರುತ್ತಾರೆ. |
| 11 | | ಪೋಲೀಸ್ ಇಲಾಖೆ | ಗೈರು ಹಾಜರಿರುತ್ತಾರೆ. |
| 12 | | ತೋಟಗಾರಿಕೆ ಅಧಿಕಾರಿಗಳು | ಗೈರು ಹಾಜರಿರುತ್ತಾರೆ. |
| 13 | ಶ್ರೀ ರಮೇಶ್ | ಬೀದಿ ದೀಪಗಳ ನಿರ್ವಹಣೆ | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಪ್ರಮೋದ್ ಕುಮಾರ್.ಎನ್.ಜಿ ರವರು ದಿನಾಂಕ: 06-02-2021 ರಂದು ಶನಿವಾರ 11.00ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ತಿಮ್ಮಯ್ಯ.ವಿ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

-2-



Scanned with CamScanner

2. ಬೀದಿ ದೀಪಗಳ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ನಿರ್ವಹಣೆಯಲ್ಲಿ ರಾಯಲ್ ಪಾರ್ಕ್ ಬಡಾವಣೆಯಲ್ಲಿ ಸರಿಯಾಗಿ ನಿರ್ವಹಿಸದೇ ಇರುವುದಾಗಿ ಸದಸ್ಯರು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಬೀದಿ ದೀಪಗಳಿಗೆ ಸಂಬಂಧಪಟ್ಟಂತೆ ಸಭೆಗೆ ಆಗಮಿಸಿದ ಅಧಿಕಾರಿಗಳ ಪ್ರತಿನಿಧಿ ಸದರಿ ದೂರಿನ ವಿಷಯವಾಗಿ ಬೀದಿ ದೀಪಗಳು ದುಸ್ಥಿತಿಯಲ್ಲಿರುವ ಸ್ಥಳಗಳಲ್ಲಿ ವ್ಯವಸ್ಥಿತವಾಗಿ ಸರಿಪಡಿಸಲಾಗುವುದು ಎಂದು ಈ ಸಭೆಗೆ ತಿಳಿಸಿ ಮುಂದಿನ ದಿನಗಳಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದು ಎಂದು ತಿಳಿಸಿರುತ್ತಾರೆ.

2. ಬೆಸ್ಕಾಂ:-

ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಯಲ್ಲಿ ತೊಂದರೆಯಾಗುತ್ತಿದ್ದು, ಇದರ ಬಗ್ಗೆ ಸಭೆಯಲ್ಲಿ ಸದರಿ ಬೆಸ್ಕಾಂ ಸಮಸ್ಯೆಗಳ ಬಗ್ಗೆ ಚರ್ಚಿಸಲು ಸಂಬಂಧಪಟ್ಟ ಅಧಿಕಾರಿಗಳು ಈ ದಿನದ ಸಭೆಗೂ ಗೈರುಹಾಜರಾಗಿರುತ್ತಾರೆ, ಇದರ ಬಗ್ಗೆ ಗಂಭೀರವಾಗಿ ಪರಿಗಣಿಸಿ ಸದರಿ ಸಮಸ್ಯೆಗಳ ಬಗ್ಗೆ ಮುಂದಿನ ಸಭೆಯಲ್ಲಿ ಸದರಿ ಸಂಬಂಧಪಟ್ಟ ಅಧಿಕಾರಿಗಳ ಮುಂದೆ ಚರ್ಚಿಸಲಾಗುವುದು

3. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ:-

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿರುವ ಬಡಾವಣೆಗಳಲ್ಲಿ ರಸ್ತೆ, ಒಳಚರಂಡಿ ಹಾಗೂ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ನಿರ್ವಹಿಸದೇ ಇರುವುದಾಗಿ ಮತ್ತು ಬೀದಿ ದೀಪಗಳ Fittings ಗಳು ಹಾಳಾಗಿದ್ದು, ಸದರಿ ಸ್ಥಳಗಳಲ್ಲಿ ಬೆಳಕಿನ ವ್ಯವಸ್ಥೆ ಇಲ್ಲದೇ ಇರುವುದು ಹಾಗೂ

ಮೇಲೆ ತಿಳಿಸಿದ ಸಮಸ್ಯೆಗಳ ಬಗ್ಗೆ ಅಂದಾಜು ಪಟ್ಟಿಯನ್ನು ಮಂಜೂರಾತಿಗಾಗಿ ಸಲ್ಲಿಸಲಾಗಿರುತ್ತದೆ ಹಾಗೂ ಅಂಜನಾಪುರ ಕೆರೆ ಹೊರಬರುವ ಬೃಹತ್ ನೀರುಗಾಲುವೆಯನ್ನು ನಿರ್ಮಿಸಿಕೊಡಲು ಹಾಗೂ 1ನೇ ಮತ್ತು 2ನೇ ಹಂತ ಬಿ.ಡಿ.ಎ ಬಡಾವಣೆಯಿಂದ ಅಂಜನಾಪುರ ಮೆಟ್ರೋ ನಿಲ್ದಾಣದವರೆಗೆ ಅಪ್ರೋಚ್ ರಸ್ತೆ ಇಲ್ಲದೇ ಇರುವುದು ಸಭಿಕರ ಗಮನಕ್ಕೆ ಬಂದಿದ್ದು ಇದರ ಬಗ್ಗೆ ತುರ್ತಾಗಿ ಕ್ರಮ ವಹಿಸಿ ಅಪ್ರೋಚ್ ರಸ್ತೆಯನ್ನು ನಿರ್ಮಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಸಭೆಯಲ್ಲಿ ಹಾಜರಿದ್ದ ಸದಸ್ಯರು ಕೋರಿದ್ದು ಇದರ ಬಗ್ಗೆ ಮೇಲಾಧಿಕಾರಿಗಳಲ್ಲಿ ಚರ್ಚಿಸಿ ಕ್ರಮಕೈಗೊಳ್ಳಲಾಗುವುದೆಂದು ಶ್ರೀ ಕೃಷ್ಣ ನಾಯಕ್, ಸಹಾಯಕ ಅಭಿಯಂತರರು ಇವರು ಹಿಂದಿನ ಸಭೆಯಲ್ಲಿ ತಿಳಿಸಿರುತ್ತಾರೆ.

ಈ ದಿನದ ಸಭೆಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು ಗೈರುಹಾಜರಾಗಿದ್ದು ಸದರಿ ಇಲಾಖೆಗೆ ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ಬಿ.ಡಿ.ಎ ವತಿಯಿಂದ ಅಂಜನಾಪುರ 196ರ ಬಿ.ಡಿ.ಎ ಬಡಾವಣೆಗಳಲ್ಲಿ ಸರಿಯಾದ ರಸ್ತೆ ನಿರ್ವಹಣೆ, ಒಳಚರಂಡಿ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ ಆಗದೇ ಇರುವ ಬಗ್ಗೆ ಸಭೆಯಲ್ಲಿನ ಎಲ್ಲಾ ಸದಸ್ಯರು ಬಿ.ಡಿ.ಎ ಅಧಿಕಾರಿಗಳ ಕಾರ್ಯದ ಬಗ್ಗೆ ಗಂಭೀರವಾಗಿ ವಿಶಾದ ಮತ್ತು ಅತೃಪ್ತಿಯನ್ನು ವ್ಯಕ್ತಪಡಿಸಿರುವ ಹಿನ್ನೆಲೆಯಲ್ಲಿ ಮುಂದಿನ ಸಭೆಯಲ್ಲಿ ಸುಧೀರ್ಘವಾಗಿ ಚರ್ಚಿಸಲು ನಿರ್ಣಯಿಸಲಾಯಿತು.

4. ಘನತ್ಯಾಜ್ಯ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿ ರಾಯಲ್ ಪಾರ್ಕ್ ಬಡಾವಣಯಲ್ಲಿ ಕಸದ ಸಂಗ್ರಹಣೆಯನ್ನು ಸರ್ಮಪಕವಾಗಿ ನಿರ್ವಹಿಸದೇ ಇರುವ ಹಾಗೂ ಅಂಜನಾಪುರ ಕೆರೆಯ ಹಿಂಭಾಗದಲ್ಲಿ ಅನಾಮಿಕರು ಕಸದ ಚೀಲಗಳನ್ನು ಹಾಗೂ ಉಪಯೋಗಕ್ಕೆ ಬಾರದ ಹಾಸಿಗೆ ದಿಂಬುಗಳನ್ನು ಹಾಗೂ Plastic ಚೀಲಗಳನ್ನು ರಾತ್ರಿ ವೇಳೆಯಲ್ಲಿ ಎಸೆಯುತ್ತಿರುವುದು ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ತ್ವರಿತವಾಗಿ ಇದರ ಬಗ್ಗೆ ಗಮನಹರಿಸಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಲು ಅಧ್ಯಕ್ಷರಲ್ಲಿ ಕೋರಲಾಯಿತು.



Scanned with CamScanner

5. ಬೀದಿನಾಯಿಗಳ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿ ರಾಯಲ್ ಪಾರ್ಕ್ ಬಡಾವಣಯಲ್ಲಿ ಹಾಗೂ ವಾರ್ಡ್ ವ್ಯಾಪ್ತಿಯ ಇತರೆ ಸ್ಥಳಗಳಲ್ಲಿ ಬೀದಿ ನಾಯಿಗಳು ಅಧಿಕವಾಗಿದ್ದು ಸಾರ್ವಜನಿಕರು ಬೀದಿ ನಾಯಿಗಳಿಂದ ಆಗಬಹುದಾದ ಅನಾಹುತಗಳು ಬಗೆ ಹರಿಸಲು ಹಾಗೂ ಮರಿಗಳನ್ನು ನಾಯಿಗಳನ್ನು ಸಂತಾನ ನಿಯಂತ್ರಣಗೊಳಿಸಲು ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ತಿಳಿಸಲು ಅಧ್ಯಕ್ಷರಲ್ಲಿ ಕೋರಲಾಯಿತು.

6. ತೋಟಗಾರಿಕೆ ಇಲಾಖೆ:-

ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಅಭಿವೃದ್ಧಿ ಪಾಧಿಕಾರಕ್ಕೆ ಸಂಬಂಧಪಟ್ಟ ಉದ್ಯಾನವನಗಳು ಇದ್ದು ಇವುಗಳನ್ನು ಸರ್ಮಕವಾಗಿ ನಿರ್ವಹಣೆ ಮಾಡುತ್ತಿರುವುದು ಕಂಡುಬಾರದೇ ಇರುವುದರಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಮುಂದಿನ ಸಭೆಗಳಿಗೆ ಹಾಜರಿರುವಂತೆ ಸಭೆಯಲ್ಲಿ ನಿರ್ಣಯಿಸಲಾಯಿತು ಸದರಿ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸದರಿ ತೋಟಗಾರಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಮೇಲಾಧಿಕಾರಿಗಳಿಗೆ ಕೋರಲು ಹಿಂದಿನ ಸಭೆಯಲ್ಲಿ ಎಲ್ಲಾ ಸದಸ್ಯರು ಕೋರಿರುತ್ತಾರೆ. ಆದರೆ ಈ ದಿನದ ಸಭೆಗೆ ಹಾಜರಾದ ಇಲಾಖೆ ಅಧಿಕಾರಿಗಳ ಪ್ರತಿನಿಧಿಗಳು ಮುಂದಿನ ದಿನಗಳಲ್ಲಿ ಉದ್ಯಾನವನಗಳನ್ನು ಸಮರ್ಕವಾಗಿ ನಿರ್ವಹಿಸಲು ಮೇಲಾಧಿಕಾರಿಗಳಲ್ಲಿ ತಿಳಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

7.ನೋಡಲ್ ಅಧಿಕಾರಿ:-

ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ

Scanned with CamScanner